# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 879 (1134)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ತೋಟಗಾರಿಕೆ ಇಲಾಖೆ ಯೋಜನೆ ಮತ್ತು ಕಾರ್ಯಕ್ರಮಗಳ ಕುರಿತು

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ತೋಟಗಾರಿಕೆ ಇಲಾಖಾ ಅಧೀನ ಕಛೇರಿಗಳು ಯಾವುವು ; ಈ ಕಛೇರಿಗಳ ಸಂಪರ್ಕ ವಿಳಾಸ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳು ಯಾವುವು ; ಈ ಕಛೇರಿಗಳಲ್ಲಿ ಮಂಜೂರಾತಿಯಾದ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯನ್ನು ಯಾವಾಗ ತುಂಬಲಾಗುವುದು; (ಜಿಲ್ಲಾವಾರು ಮತ್ತು ಕಛೇರಿವಾರು ವಿವರ ನೀಡುವುದು)

(ಆ) 2020-21 ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ಅವುಗಳ ಮಾರ್ಗಸೂಚಿಗಳು ಯಾವುವು; ಈ ಯೋಜನೆಗಳಲ್ಲಿ ರೈತರ ಆಯ್ಕೆಗೆ ಇರುವ ಮಾನದಂಡಗಳು ಯಾವುವು ; ಸರ್ಕಾರದಿಂದ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಯೋಜನೆವಾರು ಮಾಹಿತಿಯನ್ನು ಒದಗಿಸುವುದು)

(ಇ) ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅಲ್ಪಾವಧಿ ಬೆಳೆಯನ್ನು ಬೆಳೆಯಲು ಮತ್ತು ನೀರಾವರಿ ಸೌಲಭ್ಯವನ್ನು ಒದಗಿಸಲು ಇಲಾಖೆಯಿಂದ ಕ್ರಮ ವಹಿಸಲಾಗಿದೆಯೇ ; ತೋಟಗಾರಿಕೆ ಬೆಳೆ ಪ್ರದೇಶದ ವಿಸ್ತೀರ್ಣ ಹೆಚ್ಚಳಕ್ಕೆ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳು ಯಾವುವು ?